**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಟಿ.ಶ್ರೀ ಕಂಠೇಗೌಡ ಇವರು ನಿಯಮ 330ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ ನೀಡುವ ಬಗ್ಗೆ..**

**ವಿಷಯ:** ರಾಜ್ಯದಲ್ಲಿ ಐತಿಹಾಸಿಕ ಸ್ವಾತಂತ್ರ್ಯ ಪೂರ್ವದಲ್ಲಿ ಸ್ಥಾಪನೆಯಾದಂತಹ ಏಕೈಕ ಸರ್ಕಾರಿ ಸ್ವಾಮ್ಯದ ಮಂಡ್ಯ ಮೈಶುಗರ್ ಸಕ್ಕರೆ ಕಾರ್ಖಾನೆಯು ಕಳೆದ ಕೆಲವು ವರ್ಷಗಳಿಂದ ಕಬ್ಬನ್ನು ಅರೆಯದೆ ಕಾರ್ಖಾನೆಯು ಸ್ಥಗಿತವಾಗಿದ್ದು, ಇದರಿಂದ ಈ ಭಾಗದ ಕಬ್ಬು ಬೆಳೆದ ರೈತರನ್ನು ಸಂಕಷ್ಟಕ್ಕೆ ಸಿಲಿಕಿಸಿದೆ. ಆದರಿಂದ ಸದರಿ ಸಕ್ಕರೆ ಕಾರ್ಖಾನೆಯನ್ನು ಸರ್ಕಾರಿ ಸ್ವಾಮ್ಯದಲ್ಲಿ ಉಳಿಸಿಕೊಂಡು ಆರಂಭಿಸಬೇಕೆಂಬ ವಿಷಯ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಸರ್ಕಾರದ ಉತ್ತರ:**

- ಮೈಸೂರು ಸಕ್ಕರೆ ಕಂಪನಿಯು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಅಧೀನದ ಸಾರ್ವಜನಿಕ ಉದ್ದಿಮೆಯಾಗಿರುತ್ತದೆ. ಮೈಸೂರು ಸಕ್ಕರೆ ಕಾರ್ಖಾನೆಯು 2015-16, 2016-17 ಹಾಗೂ 2019-20 ನೇ ಸಾಲಿನಲ್ಲಿ ದುಡಿಯುವ ಬಂಡವಾಳದ (Working Capital) ಕೊರತೆಯಿಂದಾಗಿ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ ವಾಕೈ 05 ಸಸಕಾ 2020 ದಿನಾಂಕ 09.03.2020 ರಲ್ಲಿ ಈ ಕಾರ್ಖಾನೆಯನ್ನು ಪುನಃಶ್ಚೇತನಗೊಳಿಸುವ ಸಂಬಂಧ 2020-21ನೇ ಹಂಗಾಮಿನಿಂದ 40 ವರ್ಷಗಳ ಅವಧಿಗೆ LROT(Lease Rehabilitate Operate Transfer) ಆಧಾರದ ಮೇಲೆ ಇದ್ದಲ್ಲಿ ಇದ್ದಂತೆಯೇ (As is where is Basis) ಖಾಸಗಿಯವರಿಗೆ ಗುತ್ತಿಗೆ ನೀಡಲು ಕ್ರಮವಹಿಸುವಂತೆ ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿದೆ. ಇದಕ್ಕೆ ಸಚಿವ ಸಂಪುಟದ ದಿನಾಂಕ 27.03.2020 ರ ಸಭೆಯ ಕಾರ್ಯಸೂಚಿಯ ಕ್ರಮ ಸಂಖ್ಯೆ.03 ರಲ್ಲಿ ಘಟನೋತ್ತರ ಅನುಮೋದನೆಯನ್ನು ಪಡೆಯಲಾಗಿತ್ತು ಹಾಗೂ ಸಚಿವ ಸಂಪುಟ ಸಭೆಯ ತೀರ್ಮಾನದಂತೆ ದಿನಾಂಕ 27.04.2020 ರಂದು ಮೈಸೂರು ಸಕ್ಕರೆ ಕಾರ್ಖಾನೆಯ ಅಸ್ತಿತ್ವದಲ್ಲಿರುವ ಮಂಡ್ಯದ ಜಾಗಕ್ಕೆ ಮಾತ್ರ ಸೀಮಿತಗೊಳಿಸಿ ಸೇರ್ಪಡೆ ಆದೇಶವನ್ನು ಸಹ ಹೊರಡಿಸಲಾಗಿದೆ.

- ತದನಂತರದಲ್ಲಿ ಮೈಸೂರು ಸಕ್ಕರೆ ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದ ಮೇರೆಗೆ ನೀಡುವ ಪ್ರಸ್ತಾವನೆಗೆ ಕಾರ್ಖಾನೆಯ ವ್ಯಾಪ್ತಿಯಲ್ಲಿ ಕಬ್ಬು ಬೆಳೆಯುತ್ತಿರುವ ರೈತರು, ಷೇರುದಾರರು, ಜನಪ್ರತಿನಿಧಿಗಳು ಮತ್ತು ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿ ಕಾರ್ಖಾನೆಯನ್ನು 2020-21ನೇ ಹಂಗಾಮಿನಿಂದ ಓ & ಎಂ ಆಧಾರದ ಮೇಲೆ ನಡೆಸಲು ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಿರುತ್ತಾರೆ. ದಿನಾಂಕ 15.05.2020 ರಂದು ಮಂಡ್ಯ ಭಾಗದ ಜನ ಪ್ರತಿನಿದಿಗಳು, ರೈತ ಮುಖಂಡರುಗಳು ಹಾಗೂ ಹಿರಿಯರು ಸನ್ಮಾನ್ಯ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದ ಸಂದರ್ಭದಲ್ಲಿ ಮಾನ್ಯ ಸಕ್ಕರೆ ಸಚಿವರು ಹಾಗೂ ವ್ಯವಸ್ಥಾಪಕ ನಿರ್ದೇಶಕರೊಂದಿಗೆ ಚರ್ಚಿಸಿ ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನಃಶ್ಚೇತನಗೊಳಿಸುವ ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಮರು ಮಂಡಿಸಲು ಸೂಚಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಮೈಸೂರು ಸಕ್ಕರೆ ಕಂಪನಿ ಇವರು 2020-21ನೇ ಹಂಗಾಮಿನಿಂದ ಓ & ಎಂ ಆಧಾರದ ಮೇಲೆ ಕಾರ್ಖಾನೆಯನ್ನು ಪ್ರಾರಂಭಿಸಲು ದಿನಾಂಕ 19.05.2020 ರಂದು ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಿರುತ್ತಾರೆ.

---2

Scanned with CamScanner

- ಅದರಂತೆ, ಪ್ರಸ್ತಾವನೆಯನ್ನು ದಿನಾಂಕ 25.06.2020ರಂದು ನಡೆದ ಸಚಿವ ಸಂಪುಟಕ್ಕೆ ಮರು ಮಂಡಿಸಲಾಗಿದ್ದು, ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನಃಶ್ಚೇತನಗೊಳಿಸುವ ಕುರಿತು ಸಚಿವ ಸಂಪುಟಕ್ಕೆ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಮಾನ್ಯ ಉಪ ಮುಖ್ಯ ಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ) ಇವರ ಅಧ್ಯಕ್ಷತೆಯಲ್ಲಿ ಒಂದು ಸಚಿವ ಸಂಪುಟದ ಉಪಸಮಿತಿಯನ್ನು ರಚಿಸಲು ದಿನಾಂಕ 25.06.2020ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ.
- ಅದರಂತೆ ದಿನಾಂಕ 08.07.2020 ರಂದು ನಡೆದ ಸಚಿವ ಸಂಪುಟದ ಉಪಸಮಿತಿಯು ಸದರಿ ಕಾರ್ಖಾನೆಯನ್ನು LROT(Lease Rehabilitate Operate Transfer) ಆಧಾರದ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡಲು ಅಥವಾ ಓ & ಎಂ ಆಧಾರದ ಮೇಲೆ ಪುನಃಶ್ಚೇತನಗೊಳಿಸುವ ಸಾಧಕ ಭಾದಕಗಳ ಕುರಿತು ಕೂಲಂಕಷವಾಗಿ ಚರ್ಚಿಸಿ, ಮೈಸೂರು ಸಕ್ಕರೆ ಕಾರ್ಖಾನೆಯ ವಸ್ತುಸ್ಥಿತಿ ಆಧರಿಸಿ ತಾಂತ್ರಿಕ ವರದಿಯನ್ನು ಬೆಳಗಾವಿಯ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ವತಿಯಿಂದ ರಚಿಸಲಾಗುವ ತಾಂತ್ರಿಕ ಸಮಿತಿಯ ಮೂಲಕ ಪಡೆದು ಸಲ್ಲಿಸುವಂತೆ ಆಯುಕ್ತರು, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರು ಇವರಿಗೆ ಸೂಚಿಸಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು.
- ಅದರಂತೆ ಬೆಳಗಾವಿಯ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಿಂದ ಸಲ್ಲಿಸಿರುವ ತಾಂತ್ರಿಕ ವರದಿಯನ್ನು ಆಯುಕ್ತರು, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.
- ಆಯುಕ್ತರು, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರು ಸರ್ಕಾರಕ್ಕೆ ಸಲ್ಲಿಸಿರುವ ತಾಂತ್ರಿಕ ವರದಿಯನ್ನು ಪರಿಶೀಲಿಸಿ ಸಚಿವ ಸಂಪುಟ ಉಪ ಸಮಿತಿಯು ಕೈಗೊಳ್ಳುವ ನಿರ್ಣಯದಂತೆ ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನಃಶ್ಚೇತನಗೊಳಿಸುವ ಕುರಿತು ಸಚಿವ ಸಂಪುಟದ ಮುಂದೆ ಮಂಡಿಸಿ ಸೂಕ್ತ ನಿರ್ಣಯ ತೆಗೆದುಕೊಳ್ಳಲಾಗುವುದು.

ಸಿಐ 195 ಸಿಓಎಫ್ 2020

(ಅರಬೈಲ್ ಶಿವರಾಮ ಹೆಬ್ಬಾರ)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

Scanned with CamScanner